# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ

ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)ಪಿ.ಆರ್/289 /2020-21, ದಿನಾಂಕ : 05-12-2020.

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂಖ್ಯೆ: ಬಿ12(5)ಪಿ.ಆರ್/35/2020-21, ದಿನಾಂಕ:29-09-2020 ಹಾಗೂ ನೋಡಲ್ ಅಧಿಕಾರಿ ರವರು ದಿನಾಂಕ: 05-12-2020 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143 ವಾರ್ಡ್ ಕಛೇರಿಯಲ್ಲಿ ಸಭೆಯನ್ನು ಏರ್ಪಡಿಸಲಾಗಿ. ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ವೆಂಕಟೇಶ್ ಆರ್ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು 143 | 9480684415 |
| 3 | ಶ್ರೀ.ಗೋವಿಂದರಾಜುಲು | ಕಂದಾಯ ವಸೂಲಿಗಾರರು | 9900691698 |
| 4 | ಶ್ರೀ.ನರಸಿಂಹ | ಕಿರಿಯ ಆರೋಗ್ಯ ಪರಿವೀಕ್ಷಕರು | 8660658637 |
| 5 | ಶ್ರೀ.ಎಸ್.ಹೇಮಂತ್ ಕುಮಾರ್ | ಸಹಾಯಕ ಅಭಿಯಂತರರು ಬೆಸ್ಕಾಂ | 9449870535 |
| 6 | ಶ್ರೀ. ರಾಮಣ್ಣ | ಹಿರಿಯ ಆರೋಗ್ಯ ಪರಿವೀಕ್ಷಕರು | 9480683627 |
| 7 | ಶ್ರೀ.ಜಿ.ಮೂರ್ತಿ | ಕಿರಿಯ ಅಭಿಯಂತರರು (Electrical) | 9449153115 |
| 8 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 9 | ಶ್ರೀ.ರಾಮ ಐಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 10 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 11 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |

Scanned by CamScanner

ದಿನಾಂಕ: 05-12-2020 ರಂದು ನಡೆದ ವಾರ್ಡ್ -143ರ ಸಮಿತಿ ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳ ಅನುಮತಿಯೊಂದಿಗೆ ವಾರ್ಡ್ ಸಮಿತಿಯ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ, ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರು ಮತ್ತು ವಿವಿಧ ಇಲಾಖೆಯ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲು MMV ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರಾದ ಶ್ರೀ. ವೆಂಕಟೇಶ್ ರವರು ಮಾತನಾಡಿ MMV ರಸ್ತೆಯಲ್ಲಿ CCTV ಅಳವಡಿಸಿಕೊಡುವಂತೆ ಸಭೆಗೆ ತಿಳಿಸಿದರು, ಈ ಬಗ್ಗೆ ಚರ್ಚಿಸಲಾಗಿ ವಾರ್ಡ್ ವ್ಯಾಪ್ತಿಯಲ್ಲಿ ಕೈಗೊಳ್ಳಲಾಗುವ ಕಾಮಗಾರಿಗಳ ಲಭ್ಯವಿರುವ ಅನುದಾನದಲ್ಲಿ ತೆಗೆದುಕೊಳ್ಳಲು ಕ್ರಮ ವಹಿಸಲಾಗುವುದೆಂದು ವಾರ್ಡಿನ ಅಭಿಯಂತರರು ಸಭೆಗೆ ತಿಳಿಸಿದರು.

ನಂತರ ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಅಧ್ಯಕ್ಷರಾದ ಶ್ರೀ.ಗೋಪಾಲಕೃಷ್ಣ ರವರು ಮಾತನಾಡಿ ಮರಿಯಪ್ಪ ರಸ್ತೆಯ ಲಾಲ್‌ಬಾಗ್‌ಗೆ ಹೊಂದಿಕೊಂಡಿರುವ ಪಾದಚಾರಿ ಮಾರ್ಗದಲ್ಲಿ ಪೆಟ್ಟಿ ಅಂಗಡಿಯನ್ನು ಹಾಕಲಾಗಿದ್ದು, ಅದನ್ನು ತೆರವುಗೊಳಿಸಲು ಸಭೆಯ ಗಮನಕ್ಕೆ ತಂದರು. ಈ ಬಗ್ಗೆ ಸೂಕ್ತ ಕ್ರಮವಹಿಸಲು ವಾರ್ಡಿನ ಅಭಿಯಂತರರಿಗೆ ನೋಡಲ್ ಅಧಿಕಾರಿಗಳು ತಿಳಿಸಿದರು.

ನಂತರ MMV ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಅಧ್ಯಕ್ಷರಾದ ಶ್ರೀ. ವೆಂಕಟೇಶ್ ರವರು ಮಾತನಾಡಿ ವಾಸವಿ ದೇವಸ್ಥಾನದ ರಸ್ತೆ ಹಾಗೂ ನ್ಯಾಷನಲ್ ಹೈ ಸ್ಕೂಲ್ ರಸ್ತೆ ಜಂಕ್ಷನ್‌ನಲ್ಲಿನ ಪಾದಚಾರಿ ಮಾರ್ಗದಲ್ಲಿ ಅನಧಿಕೃತವಾಗಿ ಬಟ್ಟೆ ಅಂಗಡಿ ಇಟ್ಟುಕೊಂಡಿದ್ದು ಅದನ್ನು ತೆರವುಗೊಳಿಸುವಂತೆ ಕೋರಿ ಸಭೆಗೆ ತಿಳಿಸಿದರು. ಈ ಬಗ್ಗೆ ಸೂಕ್ತ ಕ್ರಮ ವಹಿಸಲು ನೋಡಲ್ ಅಧಿಕಾರಿಗಳು ವಾರ್ಡಿನ ಅಭಿಯಂತರರಿಗೆ ತಿಳಿಸಿದರು.

ನಂತರ ನೋಡಲ್ ಅಧಿಕಾರಿಗಳು ಮಾತನಾಡಿ ಮಾನ್ಯ ಆಯುಕ್ತರು ಕಳುಹಿಸಿರುವ ಸಂದೇಶವಾದ "BBMPMy City MyBudget" 2021-22 ರ ಬಗ್ಗೆ ಪ್ರಸ್ತಾಪಿಸಿ ಜನಾಗ್ರಹದವರ ಸಹಯೋಗದೊಂದಿಗೆ ಪಾಲಿಕೆಯಲ್ಲಿ ಚಾಲ್ತಿಯಲ್ಲಿರುವ "My City My Budget" ಯೋಜನೆಯಡಿಯಲ್ಲಿ ಈ ಬಾರಿ ಎರಡು ವಿಷಯಗಳಾದ "Public Toilet And Footpath" (ಸಾರ್ವಜನಿಕರ ಶೌಚಾಲಯ ಮತ್ತು ಪಾದಚಾರಿ ಮಾರ್ಗಗಳು) ವಿಚಾರವಾಗಿ ವಾರ್ಡ್‌ಗಳ ಸಾರ್ವಜನಿಕರಿಂದ ಮತ್ತು ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳಿಂದ ಸಲಹೆ ಮತ್ತು ಸೂಚನೆಗಳನ್ನು ತಿಳಿಸಲು ಕೋರಿರುವುದನ್ನು ಸಭೆಗೆ ತಿಳಿಸಿದರು. ಈ ಬಗ್ಗೆ ಮಾನ್ಯ ಆಯುಕ್ತರು ಮತ್ತು ವಿಶೇಷ ಆಯುಕ್ತರು ಮತ್ತು ವಿಶೇಷ ಆಯುಕ್ತರು ಬಿಬಿಎಂಪಿ ರವರುಗಳು ಮುಂದಿನ ವಾರ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಜೊತೆ ವಿಡಿಯೋ

Scanned by CamScanner

ಸಂವಾದವನ್ನು ಕರೆದಿದ್ದು, ಮಾನ್ಯ ಆಯುಕ್ತರ ಸಂದೇಶವನ್ನೂ ಸಹ ತಮಗೆ ಕಳುಹಿಸಲಾಗಿದ್ದು, ಅದರಂತೆ ತಾವುಗಳು ತಮ್ಮ ಸಲಹೆ ಸೂಚನೆಗಳೊಂದಿಗೆ ವಿಡಿಯೋ ಸಂವಾದದಲ್ಲಿ ಪಾಲ್ಗೊಳ್ಳಲು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಸದಸ್ಯರುಗಳನ್ನು ಕೋರಿದರು. ಅದಕ್ಕೆ ಸದರಿಯವರುಗಳು ಸಹಮತ ವ್ಯಕ್ತಪಡಿಸಿದರು.

ನಂತರ ಕಾರ್ಯದರ್ಶಿಗಳಿಂದ ಎಲ್ಲರಿಗೂ ವಂದಿಸಿ ಕಮಿಟಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ –143, ವಿ. ವಿ.ಪುರಂ

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 143 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)

Scanned by CamScanner